③

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಇವರು ನಿಯಮ-330 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.**

**ವಿಷಯ:-**

**ದಿನಾಂಕ:01.04.2006ರ ನಂತರ ಅನುದಾನಿತ ಶಾಲಾ ಕಾಲೇಜುಗಳಲ್ಲಿ ನೇಮಕಗೊಂಡಿರುವ ಬೋಧಕ/ಬೋಧಕೇತರ ಸಿಬ್ಬಂದಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದೆ. ಈ ಹೊಸ ಪಿಂಚಣಿ ಯೋಜನೆಯ ಸವಲತ್ತುಗಳು ಸದರಿಯವರಿಗೆ ಇದುವರೆವಿಗೂ ದೊರೆಯದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆಯನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.**

**ಉತ್ತರ:-**

2006ರ ಪಿಂಚಣಿ ನೀತಿಯಲ್ಲಿ ಸರ್ಕಾರದ ಅನುದಾನಿತ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ: FD (SPL)04 PET 2005, ದಿನಾಂಕ: 31.03.2006ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

...(8) The defined benefit pension to the employees of grant-in-aid educational institutions shall be discontinued to the recruits joining on or after 01.04.2006. the new contributory pension scheme shall be applicable to them on optional basis to the employee & the employer and the option shall be exercised by both. However, the employer's contribution shall be met by the respective institutions and not by the state government.

- ಈ ಆದೇಶವು ದಿನಾಂಕ: 01/04/2006ರಿಂದ ಜಾರಿಗೆ ಬಂದಿರುತ್ತದೆ.
- ದಿನಾಂಕ: 01/04/2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.
- ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006 ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ.
- ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ (optional) ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

**ಸಂಖ್ಯೆ: ಇಪಿ 48 ಎಸ್‌ಇಎಸ್ 2020**

S.S

(ಎಸ್.ಸುರೇಶ್‌ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು